ಉಪಾಧ್ಯಕ್ಷರು :- ಪ್ರಸ್ತಾಪ ಏನೆಂದರೆ ''ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1994ರ ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಚುಕ್ಕೆ ಗುರುತಿಲ್ಲದ ಲಿಖಿತ ಪ್ರಶ್ನೋತ್ತರಗಳ ಮಂಡನೆ

ಶ್ರೀ ಹಾರ್ನಹಳ್ಳಿ ರಾಮಸ್ವಾಮಿ :- (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಮಾನ್ಯ ಅಧ್ಯಕ್ಷರೇ, ದಿನಾಂಕ 6-9-94ರ 90ಚುಕ್ಕೆ ಗುರುತಿನ ಪ್ರಶ್ನೆಗಳ ಪೈಕಿ 20 ಪ್ರಶ್ನೆಗಳ ಉತ್ತರಗಳನ್ನು ಸಭೆಯ ಮುಂದೆ ಇಡುತ್ತೇನೆ ಮತ್ತು ಚುಕ್ಕೆ ಗುರುತಿಲ್ಲದ 45 ಪ್ರಶ್ನೆಗಳ ಪೈಕಿ 36 ಪ್ರಶ್ನೆಗಳ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ. ಅದೇ ರೀತಿ ದಿನಾಂಕ 7-9-94ರಂದು ಪ್ರಶ್ನೋತ್ತರ ವೇಳೆ ರದ್ದಾದ ಕಾರಣ ಚುಕ್ಕೆ ಗುರುತಿನ 20 ಪ್ರಶ್ನೆಗಳ ಪೈಕಿ 13 ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ ಮತ್ತು ಚುಕ್ಕೆ ಗುರುತಿಲ್ಲದ 28 ಪ್ರಶ್ನೆಗಳ ಪೈಕಿ 13 ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ದಿನಾಂಕ 6.9.94ರ ಚುಕ್ಕೆಗುರುತಿನ ಪ್ರಶ್ನೋತ್ತರಗಳು

ವಿಷಯ : ರಾಜ್ಯದಲ್ಲಿ ಹೈನು ಅಭಿವೃದ್ಧಿ ಕುರಿತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 155 (73)

ಶ್ರೀ ಬಿ.ಎಸ್.ಯಡಿಯೂರಪ್ಪ (ಶಿಕಾರಿಪುರ) :- ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೈನಾಭಿವೃದ್ಧಿಗೆ 1991-92, 1992-93 ಹಾಗೂ 1993-94ರ ಆಯವ್ಯಯದಲ್ಲಿ ನಿಗಧಿಪಡಿಸಿದ ಖರ್ಚಾದ ಹಾಗೂ ಖರ್ಚಾಗದೆ ಉಳಿದ ಹಣವೆಷ್ಟು;

ಆ) 1994-95 ರಲ್ಲಿ ಇವುಗಳಿಗೆ ಎಷ್ಟು ಹಣ ನಿಗದಿಪಡಿಸಲಾಗಿದೆ?

ಶ್ರೀ ಎಂ.ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು) :-